**ಸಾಕ್ಷಿಯನ್ನು ದಿನಾಂಕಃ 09.07.2026 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಪ್ರತಿವಾದಿ ಪರ ಶ್ರೀ ಜಿ ಎನ್ ಎಸ್ ವಕೀಲರಿಂದಃ**

ನಾನು ಈ ದಿನ ನನ್ನ ಮುಖ್ಯ ವಿಚಾರಣೆಯ ಬಾಬ್ತು ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿರುವ ಅಂಶಗಳು ಮತ್ತು ಸಂಗತಿಗಳು ಸತ್ಯವಾಗಿರುತ್ತದೆ ಎಂದು ಪ್ರಮಾಣೀಕರಿಸುತ್ತೇನೆ.

ಈ ಹಿಂದೆ ಪ್ರತಿವಾದಿಯ ಪರ ನಿಡಿಃ 1 ಮತ್ತು 2 ಎಂದು ಗುರುತಾಗಿರುವ ದಾಖಲೆಗಳನ್ನು ಮುಂದುವರಿಸಬೇಕಾಗಿ ಕೋರುತ್ತೇನೆ.

ನಾನು ಪ್ರತಿವಾದಿಯು ನನಗೆ ಬರೆದುಕೊಟ್ಟಿರುವ ಮೊಖ್ತ್ಯಾರು ನಾಮೆಯನ್ನು ಹಾಜರುಪಡಿಸಿದ್ದು, ಅದನ್ನು ನಿಶಾನೆಯಾಗಿ ಗುರುತಿಸುವಂತೆ ಕೋರುತ್ತೇನೆ. ಸದರಿ ದಾಖಲೆಯನ್ನು ನಿಡಿಃ 3 ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ ವಾದಿ ಪರ ಶ್ರೀ ಎಂ ಜೆ ವಕೀಲರು ಪಾಟೀ ಸವಾಲಿಗಾಗಿ ಸಮಯ ಕೋರಿದ್ದು ಸಮಯ ನೀಡಿ ಮುಂದೂಡಲಾಯಿತು.**

ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.

ಓ. ಹೇ.ಕೇ. ಸರಿ ಇದೆ

(ಮೋಹನಕುಮಾರಿ ಎನ್. ಬಿ)
1 ನೇ ಅಪರ ಹಿರಿಯ ಸಿವಿಲ್ ನ್ಯಾಯಾಧೀಶರು,
ಮದ್ದೂರು.